## ಕರ್ನಾಟಕ ವಿಧಾನ ಪರಿಷತ್ತು

1. **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 672**
2. **ಮಾನ್ಯ ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು(ವಿಧಾನಸಭೆಯಿಂದ ಚುನಾಯಿತರಾದವರು)**
3. **ಉತ್ತರಿಸಬೇಕಾದ ದಿನಾಂಕ : 21.02.2023**
4. **ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಪ್ರಸ್ತುತ ಕಬ್ಬು ಬೆಳೆಗಾರರಿಗೆ ಪ್ರತಿ ಟನ್ ಕಬ್ಬಿಗೆ ನೀಡುತ್ತಿರುವ ಬೆಂಬಲ ಬೆಲೆಯೆಷ್ಟು; | ಕೇಂದ್ರ ಸರ್ಕಾರವು ಪತ್ರ ಸಂಖ್ಯೆ 3(1)2021-ಎಸ್‌ಪಿ-I ದಿನಾಂಕ 17.08.2022 ರಂತೆ 2022-23ನೇ ಸಕ್ಕರೆ ಹಂಗಾಮಿಗೆ ಈ ಕೆಳಗಿನಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು(Fair and Remunerative Price) ನಿಗದಿಪಡಿಸಿದೆ.<br><br>1. ಶೇಕಡ 10.25 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ ರೂ.3050/-<br><br>2. ಶೇಕಡ 10.25 ಕ್ಕೆ ಮೇಲ್ಪಟ್ಟು ಇಳುವರಿಗೆ ನಂತರದ ಶೇಕಡ 1 ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.305/- ರಂತೆ ಹೆಚ್ಚುವರಿ ಬೆಲೆ.<br><br>3. ಶೇಕಡ 10.25 ಕ್ಕಿಂತ ಕಡಿಮೆ ಹಾಗೂ ಶೇಕಡ 9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಶೇಕಡ 1 ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.305/-ರ ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು<br><br>4. ಶೇಕಡ 9.5 ಅಥವಾ 9.5 ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.2821.25 ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ.<br><br>ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್.ಆರ್.ಪಿ. ದರದಂತೆ, ರಾಜ್ಯದ ಸಕ್ಕರೆ ಕಾರ್ಖಾನೆಗಳು 2021-22ನೇ ಸಾಲಿನಲ್ಲಿ ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯನ್ನಾಧರಿಸಿ, 2022-23ನೇ ಕಬ್ಬು ನುರಿಸುವ ಹಂಗಾಮಿಗೆ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ-2014ರ ಕಲಂ 9(1)ರ ಪ್ರಕಾರ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ಕಾರ್ಖಾನೆವಾರು ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು(Fair and |

| | | |
|---|---|---|
| | | Remunerative Price) ನಿಗದಿಗೊಳಿಸಿ ದಿನಾಂಕ 18.10.2022 ರಂದು ಆದೇಶವನ್ನು ಹೊರಡಿಸಲಾಗಿದೆ. |
| (ಆ) | ಇತರೆ ರಾಜ್ಯಗಳಿಗೆ (ಉದಾ: ಪಂಜಾಬ್, ಗುಜರಾತ್, ಉತ್ತರ ಪ್ರದೇಶ ಮತ್ತು ಮಹಾರಾಷ್ಟ್ರ) ಹೋಲಿಸಿದಲ್ಲಿ ಕರ್ನಾಟಕ ರಾಜ್ಯದಲ್ಲಿ ಕಬ್ಬು ಬೆಳೆಗಾರರಿಗೆ ಪ್ರತಿ ಟನ್ ಕಬ್ಬಿಗೆ ನೀಡುತ್ತಿರುವ ಬೆಂಬಲ ಬೆಲೆಯು ಕಡಿಮೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್.ಆರ್.ಪಿ. ದರದಂತೆ ರಾಜ್ಯದಲ್ಲಿ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು (Fair and Remunerative Price) ನಿಗದಿಗೊಳಿಸಲಾಗುವುದು. ರಾಜ್ಯ ಸರ್ಕಾರವು ಸಹ ಹೆಚ್ಚುವರಿ ಕಬ್ಬಿನ ದರ ನಿಗದಿಗೊಳಿಸುವಂತೆ ರೈತ ಸಂಘಟನೆಗಳು ಒತ್ತಾಯಿಸಿದ್ದರ ಹಿನ್ನೆಲೆಯಲ್ಲಿ 2022-23ನೇ ಹಂಗಾಮಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಕಬ್ಬಿನ ಬೆಲೆ ನಿಗದಿಗೊಳಿಸುವ ಸಂಬಂಧ ಸಾಧಕ-ಬಾಧಕಗಳ ಬಗ್ಗೆ ಪರಿಶೀಲಿಸಲು ಹಾಗೂ ಸಕ್ಕರೆ ಕಾರ್ಖಾನೆಗಳಿಗೆ ಬರುವ ಆದಾಯದ ಲೆಕ್ಕಾಚಾರವನ್ನುಅಧ್ಯಯನ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಲು ತಾಂತ್ರಿಕ ಸಮಿತಿಯನ್ನು ರಚಿಸಲಾಗಿತ್ತು.<br><br>ಸದರಿ ತಾಂತ್ರಿಕ ಸಮಿತಿಯು ನೀಡಿರುವ ವರದಿಯನ್ನಾಧರಿಸಿ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ:ಡಿಎಸ್‌ಕೆ/ಎಸ್‌ಕೆ/04/2022-23 ದಿನಾಂಕ: 05.12.2023 ರನ್ವಯ ರಾಜ್ಯದಲ್ಲಿ ಎಥನಾಲ್ ಉತ್ಪಾದಿಸುವ ಎಲ್ಲಾ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಮೊದಲ ಕಂತಿನಲ್ಲಿ ಕೇಂದ್ರ ಸರ್ಕಾರವು 2022-23ನೇ ಸಾಲಿಗೆ ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯ ಜೊತೆಗೆ ಪ್ರತಿ ಮೆ. ಟನ್ ಒಂದಕ್ಕೆ ರೂ.50/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಿರುತ್ತದೆ. ಇದರಿಂದಾಗಿ ರಾಜ್ಯದ ರೈತರಿಗೆ ರೂ.204.47 ಕೋಟಿಗಳಷ್ಟು ಹೆಚ್ಚುವರಿ ಕಬ್ಬಿನ ಬಿಲ್ಲು ಸಿಗಲಿದೆ.<br><br>ಮುಂದುವರೆದು, ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಮೊದಲ ಕಂತಿನಲ್ಲಿ ಕೇಂದ್ರ ಸರ್ಕಾರವು 2022-23ನೇ ಸಾಲಿಗೆ ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯ ಜೊತೆಗೆ ಪ್ರತಿ ಮೆ. ಟನ್ ಒಂದಕ್ಕೆ ರೂ.100/- ಗಳನ್ನು (ಎಥನಾಲ್ ಉತ್ಪಾದಿಸುವ ಕಾರ್ಖಾನೆಗಳು ಸೇರಿದಂತೆ) ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಲಾಗಿದೆ. ಇದರಿಂದಾಗಿ ರಾಜ್ಯದ ರೈತರಿಗೆ ರೂ.622.00 ಕೋಟಿಗಳಷ್ಟು ಹೆಚ್ಚುವರಿ ಕಬ್ಬಿನ ಬಿಲ್ಲು ಸಿಗಲಿದೆ. |
| (ಇ) | ಬಂದಿದ್ದಲ್ಲಿ, ರಾಜ್ಯದ ಕಬ್ಬು ಬೆಳೆಗಾರರ ಮೂಲ ಬೇಡಿಕೆಯಾಗಿರುವ ಬೆಂಬಲ ಬೆಲೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | |

| | | |
|---|---|---|
| | | 2022-23ನೇ ಸಾಲಿನಲ್ಲಿ ಕಬ್ಬು ನುರಿಸುವ ಹಂಗಾಮು ಮುಗಿದ ನಂತರ ವಾಸ್ತವಿಕವಾಗಿ ಸಕ್ಕರೆ, ಎಥನಾಲ್ ಮತ್ತು ಇತರೆ ಉಪ ಉತ್ಪನ್ನಗಳ ಮಾರಾಟದಿಂದ ಬರುವ ಆದಾಯವನ್ನು ಹಂಚಿಕೆ ಸೂತ್ರದ ಪ್ರಕಾರ ಪರಿಗಣಿಸಿ ಅಂತಿಮ ಕಬ್ಬಿನ ದರವನ್ನು ನಿರ್ಧರಿಸಲಾಗುವುದು. |

ಸಂಖ್ಯೆ: ಸಿಐ 31 ಎಸ್‌ಜಿಎಫ್ 2023

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು